"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

# ಕರ್ನಾಟಕ ವಿಧಾನ ಪರಿಷತ್ತು

ದಿನಾಂಕ: 18ನೇ ಜುಲೈ 2019
ಗುರುವಾರ

## <u>ವಿಷಯಾನುಕ್ರಮಣಿಕೆ</u>

1. ಬಹುಮತ ಕಳೆದುಕೊಂಡಿರುವ ಸರಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಧರಣಿ.

- ಶ್ರೀ ಐವನ್ ಡಿ'ಸೋಜಾ
- ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು
- ಡಾ:ಜಯಮಾಲ (ಸಭಾನಾಯಕರು)
- ಶ್ರೀ ಆರ್.ಧರ್ಮಸೇನ
- ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಸರ್ಕಾರದ ಮುಖ್ಯ ಸಚೇತಕರು)

.......

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(93)18-07-2019(11-30)ಹೆಚ್‌ವಿ-ವಿಕೆ**

**ಕರ್ನಾಟಕ ವಿಧಾನ ಪರಿಷತ್ತು**

**ಗುರುವಾರ, 18ನೇ ಜುಲೈ 2019**

**ಸದನವು ವಿಧಾನಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ**
**ಪೂರ್ವಾಹ್ನ 11 ಗಂಟೆ 35 ನಿಮಿಷಕ್ಕೆ ಸಮಾವೇಶಗೊಂಡಿತು.**

**ಸಭಾಪತಿ (ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ) ಅವರು**
**ಪೀಠದಲ್ಲಿ ಉಪಸ್ಥಿತರಿದ್ದರು.**

**(ಸದನ ಪ್ರಾರಂಭವಾಗುತ್ತಿದ್ದಂತೆಯೇ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಭಾರತೀಯ ಜನತಾ ಪಕ್ಷದ ಎಲ್ಲ ಸದಸ್ಯರು 'ಬಹುಮತವಿಲ್ಲದ ಸರ್ಕಾರಕ್ಕೆ ಧಿಕ್ಕಾರ' ಎಂದು ಸರ್ಕಾರದ ವಿರುದ್ಧ ಘೋಷಣೆಯನ್ನು ಕೂಗುತ್ತಾ, ಭಿತ್ತಿಪತ್ರಗಳನ್ನು ಪ್ರದರ್ಶಿಸಿ ಸದನದ ಬಾವಿಗಿಳಿದು ಧರಣಿ ಕುಳಿತರು)**

**(ಗೊಂದಲ)**

**ಸಭಾಪತಿಯವರು:-** ಕೆಳಮನೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ವಿಶ್ವಾಸ ಮತಯಾಚನೆ ಮಾಡುತ್ತಿರುವ ಈ ಸಂದರ್ಭದಲ್ಲಿ ಮಾನ್ಯ ಸಚಿವರುಗಳು ಈ ಮನೆಯಲ್ಲಿ ಹಾಜರಿರುವುದಕ್ಕೆ ಸಾಧ್ಯವಾಗದೇ ಇರುವ ಕಾರಣ ಈ ಸದನವನ್ನು ಮಧ್ಯಾಹ್ನ 3 ಗಂಟೆ 30 ನಿಮಿಷಗಳವರೆಗೆ ಮುಂದೂಡಲಾಗುತ್ತಿದೆ.

**(11 ಗಂಟೆ 37 ನಿಮಿಷಗಳಿಗೆ ಮುಂದೂಡಲ್ಪಟ್ಟ ಸದನವು ಪುನಃ ಮಧ್ಯಾಹ್ನ 3 ಗಂಟೆ 30 ನಿಮಿಷಗಳಿಗೆ ಸಮಾವೇಶಗೊಳ್ಳಲು ತೀರ್ಮಾನಿಸಿತು.)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(94)18-07-2019/3.40/ಡಿಎಸ್-ಬಿಎನ್ಎಸ್

**(ಸದನವು ಪುನಃ ಮಧ್ಯಾಹ್ನ 3 ಗಂಟೆ 46 ನಿಮಿಷಕ್ಕೆ ಪ್ರಾರಂಭವಾಯಿತು)**

**(ಮಾನ್ಯ ಸಭಾಪತಿಯವರು ಪೀಠವನ್ನಲಂಕರಿಸಿದರು)**

**(ಸದನ ಪ್ರಾರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಬಿಜೆಪಿಯ ಉಳಿದೆಲ್ಲಾ ಸದಸ್ಯರು "ಭಾರತ್ ಮಾತಾಕೀ ಜೈ" ಎಂದು ಘೋಷಣೆಯನ್ನು ಕೂಗುತ್ತಾ ಸದನದ ಬಾವಿಗೆ ಬಂದು ಸರ್ಕಾರದ ವಿರುದ್ಧ "ಅಲ್ಪ ಮತಕ್ಕಿಳಿದ ಸಮ್ಮಿಶ್ರ ಸರ್ಕಾರ, ಮುಖ್ಯಮಂತ್ರಿಗಳೇ ರಾಜೀನಾಮೆ ನೀಡಿ", "ಜಿಂದಾಲ್‌ಗೆ ಪುಕ್ಕಟೆ ಭೂಮಿ ಕೊಟ್ಟು ಅಲ್ಪಮತಕ್ಕಿಳಿದ ಸರ್ಕಾರ" ಎಂದು ಫಲಕಗಳನ್ನು ಪ್ರದರ್ಶಿಸಿ ಘೋಷಣೆಗಳನ್ನು ಕೂಗುತ್ತಿದ್ದರು)**

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರುಗಳು ನೀರಿಲ್ಲದ ಬಾವಿಯೊಳಗೆ ಬಿದ್ದಿದ್ದಾರೆ, ಅಲ್ಲಿ ನೀರಿಲ್ಲ. ದಯಮಾಡಿ ಸದಸ್ಯರುಗಳು ಬಾವಿಯಿಂದ ಹೊರಗೆ ಬರಬೇಕು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಪ್ರಜಾಪ್ರಭುತ್ವ ವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ.

**ಡಾ||ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದ ಸದಸ್ಯರುಗಳು ದಯವಿಟ್ಟು ಸದನದ ಬಾವಿಯಿಂದ ಹೊರಗೆ ಬರಲು ಅವಕಾಶ ಮಾಡಿಕೊಡಿ.

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ಬಿಜೆಪಿಯವರು ನಮ್ಮ ಕಾಂಗ್ರೆಸ್ ಪಕ್ಷದ ಶಾಸಕರುಗಳನ್ನು ಅಪಹರಣ ಮಾಡಿದ್ದಾರೆ. ಆ ಬಗ್ಗೆ ತನಿಖೆಯನ್ನು ಮಾಡಿ.

(ಗೊಂದಲ)

**ಡಾ||ಜಯಮಾಲ:-** ಮಾನ್ಯ ಸಭಾಪತಿಯವರೇ, ಸದನ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೂ ವಿರೋಧ ಪಕ್ಷದವರು ಸದನವನ್ನು ನಡೆಸಲು ಬಿಡುತ್ತಿಲ್ಲ. ಸದನವನ್ನು ನಡೆಸಲು ಅವಕಾಶವನ್ನು ಮಾಡಿಕೊಡಿ ಎಂದು ತಾವು ಅವರಿಗೆ ಹೇಳಬೇಕು.

(ಗೊಂದಲ)

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:–** ಈಗ ಸದನವನ್ನು ಸಂಜೆ 5 ಗಂಟೆ 30 ನಿಮಿಷದವರೆಗೆ ಮುಂದೂಡಲಾಗಿದೆ.

**(ಸದನವು ಮಧ್ಯಾಹ್ನ 3 ಗಂಟೆ 47 ನಿಮಿಷಕ್ಕೆ ಮುಂದೂಡಲ್ಪಟ್ಟಿತು)**

(95)18-07-2019(6-00)ಎಂವಿ-ಜಿಆರ್

**(ಸಭಾಪತಿಯವರ ಉಪಸ್ಥಿತಿ)**

**(ಮಧ್ಯಾಹ್ನ 3 ಗಂಟೆ 47 ನಿಮಿಷಕ್ಕೆ ಮುಂದೂಡಲ್ಪಟ್ಟ ಸದನವು ಪುನಃ ಸಂಜೆ 6 ಗಂಟೆ 04 ನಿಮಿಷಕ್ಕೆ ಸಮಾವೇಶಗೊಂಡಿತು)**

**(ಸದನ ಆರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಬಿಜೆಪಿಯ ಎಲ್ಲಾ ಸದಸ್ಯರುಗಳು "ಬಹುಮತವಿಲ್ಲದ ಸರ್ಕಾರಕ್ಕೆ ಧಿಕ್ಕಾರ, ಧಿಕ್ಕಾರ, ಮುಖ್ಯಮಂತ್ರಿಗಳೇ ರಾಜೀನಾಮೆ ಕೊಡಿ, ರಾಜೀನಾಮೆ ಬೇಕೇ ಬೇಕು" ಎಂದು ಸದನದ ಬಾವಿಯಲ್ಲಿ ಫಲಕಗಳನ್ನಿಡಿದು ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಿದ್ದರು)**

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–** ಮಾನ್ಯ ಸಭಾಪತಿಯವರೇ, ವಿರೋಧಪಕ್ಷದವರು ನಮ್ಮ ಶಾಸಕರುಗಳನ್ನು ಕರೆದುಕೊಂಡು ಬರಲಿ. ನಮ್ಮ ಸರ್ಕಾರ ಬಹುಮತದಿಂದ ನಡೆಯುತ್ತಿರುವಾಗ ರಾಜೀನಾಮೆಯನ್ನು ಕೊಡುವುದಕ್ಕೆ ಆಗುತ್ತದೆಯೇ?

**(ಗೊಂದಲ)**

**ಡಾ:ಜಯಮಾಲ (ಸಭಾ ನಾಯಕರು):–** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರು ಕಳೆದ ಮೂರು ದಿವಸಗಳಿಂದ ಸದನದಲ್ಲಿ ಧರಣಿ ಮಾಡುತ್ತಿದ್ದಾರೆ. ಆದ್ದರಿಂದ ವಿರೋಧ ಪಕ್ಷದವರು ಧರಣಿಯನ್ನು ಬಿಟ್ಟು ತಮ್ಮ ತಮ್ಮ ಸ್ಥಾನಗಳಿಗೆ ತೆರಳಿ ಸದನವನ್ನು ನಡೆಸುವುದಕ್ಕೆ ಅವಕಾಶ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತಿದ್ದೇನೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):–** ಮಾನ್ಯ ಸಭಾಪತಿಯವರೇ, ತಮ್ಮ ಗಮನಕ್ಕೆ ಸ್ಪಷ್ಟವಾಗಿ ತರಬಯಸುವುದೇನೆಂದರೆ, ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ಆಡಳಿತ ಪಕ್ಷದವರ ಸಂಖ್ಯೆ ಈಗ ಕೇವಲ 98ಕ್ಕೆ ಬಂದಿರಬಹುದು. ಈಗಿನ ಅಂಕಿ ಅಂಶಗಳ ಪ್ರಕಾರ ಅವರ ಸಂಖ್ಯೆ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

101 ಇದೆ. ಇಷ್ಟೊಂದು ಅಲ್ಪಮತ ಇರುವ ಸರ್ಕಾರ, ಬಹುಮತವನ್ನು ಸಾಬೀತುಪಡಿಸುವುದಕ್ಕೆ ಸಾಧ್ಯವೇ ಇಲ್ಲ ಎನ್ನುವಂತಹ ಮಟ್ಟಕ್ಕೆ ಬಂದಿದೆ ಎಂಬ ಮಾತನ್ನು ತಮ್ಮ ಮುಖಾಂತರ ಹೇಳುವುದಕ್ಕೆ ಬಯಸುತ್ತಿದ್ದೇನೆ.

**ಶ್ರೀ ಅರುಣ ಶಹಾಪುರ:-** ಮಾನ್ಯ ಸಭಾಪತಿಯವರೇ,...

**(ಗೊಂದಲ)**

**ಡಾ:ಜಯಮಾಲ:-** ಮಾನ್ಯ ಸಭಾಪತಿಯವರೇ, ನಮ್ಮನ್ನು ಈ ಸ್ಥಿತಿಗೆ ತಂದವರು ಮಾನ್ಯ ವಿರೋಧ ಪಕ್ಷದವರು. ಬಹುಮತ ಹೊಂದಿರುವ ಆಡಳಿತ ಪಕ್ಷದ ಸದಸ್ಯರುಗಳನ್ನು ಕೂಡ ತಮ್ಮ ಹಿಡಿತದಲ್ಲಿಟ್ಟುಕೊಂಡು ಈಗ ಬಹುಮತ ಸಾಬೀತುಪಡಿಸಬೇಕೆಂದು ಇವತ್ತಿನ ದಿವಸ ಅವರೇ ಮಾತನಾಡುತ್ತಿದ್ದಾರೆ. ಅದಕ್ಕೆ ನಾವು ಏನು ಹೇಳಬೇಕು?

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಸರ್ಕಾರಿ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೇ, ಮಾನ್ಯ ವಿರೋಧ ಪಕ್ಷದ ನಾಯಕರೇ, ಅವರಿಗೆ 2 ಕೋಟಿ ರೂಪಾಯಿಗಳನ್ನು ಕೊಟ್ಟು. . .

**(ಗೊಂದಲ)**

**ಸಭಾಪತಿಯವರು:-** ಈಗ ಸದನವನ್ನು ನಾಳೆ ಮಧ್ಯಾಹ್ನ 12.00 ಗಂಟೆಯವರೆಗೆ ಮುಂದೂಡಲಾಗಿದೆ.

**(ಸದನವು ಸಂಜೆ 6 ಗಂಟೆ 6 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 19ನೇ ಜುಲೈ ಮಾಹೆ 2019ರ ಶುಕ್ರವಾರದಂದು ಮಧ್ಯಾಹ್ನ 12.00 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು)**

~~~~

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"
~~~~